**All India Radio: Bangalore**
**Regional Bulletin In Kannada**
**30.04.2025 / 6.40 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**<><><><>**

ಮುಖ್ಯಾಂಶಗಳು

1. ಜನಗಣತಿಯೊಂದಿಗೆ ಜಾತಿ ಗಣತಿ ನಡೆಸಲು ಕೇಂದ್ರ ಸರ್ಕಾರ ನಿರ್ಧಾರ
2. ಬಸವಣ್ಣನ ತತ್ವದ ಮೂಲಕ ಮೌಢ್ಯವನ್ನು ತ್ಯಜಿಸುವ ಶಪಥ ಮಾಡುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ
3. ಹುಬ್ಬಳ್ಳಿ ಬಾಲಕಿ ಅಪಹರಣ, ಎನ್‌ಕೌಂಟರ್ ಪ್ರಕರಣ; ವರದಿ ಸಲ್ಲಿಸುವಂತೆ ಸರ್ಕಾರಕ್ಕೆ ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗ ಸೂಚನೆ
4. ನಾಳೆಯಿಂದ ನಾಲ್ಕು ದಿನಗಳ ಕಾಲ ಮುಂಬೈನಲ್ಲಿ ವೇವ್ಸ್ ಶೃಂಗಸಭೆ; ಪ್ರಧಾನಿ ನರೇಂದ್ರ ಮೋದಿ ಉದ್ಘಾಟನೆ
5. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಶಾಂತಿ ಕದಡಲು ಯತ್ನಿಸಿದರೆ, ಕಠಿಣ ಕ್ರಮ; ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಎಚ್ಚರಿಕೆ

<><><><>

ಮುಂಬರುವ ಜನಗಣತಿಯಲ್ಲಿ ಜಾತಿ ಗಣತಿಯನ್ನು ಸೇರಿಸಲು ಕೇಂದ್ರ ಸರ್ಕಾರ ನಿರ್ಧರಿಸಿದೆ. ನವದೆಹಲಿಯಲ್ಲಿಂದು ಪ್ರಧಾನಿ ಅಧ್ಯಕ್ಷತೆಯಲ್ಲಿ ನಡೆದ ಸಂಪುಟ ಸಭೆಯಲ್ಲಿ ಕೆಲವು ರಾಜ್ಯಗಳು ಜಾತಿ ಸಮೀಕ್ಷೆ ನಡೆಸಿರುವ ಹಿನ್ನೆಲೆಯಲ್ಲಿ ಜಾತಿ ಸಮೀಕ್ಷೆಗೆ ನಿರ್ಧರಿಸಲಾಗಿದೆ ಎಂದು ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ.

ರಾಜಕೀಯ ಉದ್ದೇಶದಿಂದ ಸಾಮಾಜಿಕ ಸ್ವಾಸ್ಥ್ಯ ಹಾಳಾಗಬಾರದು ಎಂಬ ಹಿನ್ನೆಲೆಯಲ್ಲಿ ಜನಗಣತಿಯಲ್ಲಿ ಜಾತಿಗಣತಿಯ ಮಾಹಿತಿಯನ್ನು ದಾಖಲಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ಜನಗಣತಿ ಜೊತೆಯಲ್ಲಿ ಜಾತಿ ಗಣತಿಯನ್ನೂ ನಡೆಸುವ ಕೇಂದ್ರ ಸರ್ಕಾರದ ತೀರ್ಮಾನವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ವಾಗತಿಸಿದ್ದಾರೆ. ಜಾತಿ ಗಣತಿ ಜೊತೆಗೆ ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನೂ ನಡೆಸಬೇಕೆಂದು ಮನವಿ ಮಾಡಿದ್ದಾರೆ. ವೈಜ್ಞಾನಿಕವಾದ

ಮೀಸಲಾತಿ ನೀತಿಯನ್ನು ರೂಪಿಸುವುದೇ ಜಾತಿ ಆಧಾರಿತ ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆಯ ಮೂಲ ಉದ್ದೇಶವಾಗಿದೆ ಎಂದು ಹೇಳಿದ್ದಾರೆ.

<><><><>

ಪ್ರಜಾಪ್ರಭುತ್ವದಲ್ಲಿ ಚರ್ಚೆ ಇದ್ದು, ಸರ್ವಾಧಿಕಾರದಲ್ಲಿ ಚರ್ಚೆಗೆ ಅವಕಾಶ ಇಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬಾಗಲಕೋಟೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬಸವ ಜಯಂತಿ ಪ್ರಯುಕ್ತ ಆಯೋಜಿಸಿದ್ದ "ಶರಣರ ವೈಭವ-೨೦೨೫" ಉದ್ಘಾಟಿಸಿ ಹಾಗೂ ಬಸವ ಶ್ರೀ ಪ್ರಶಸ್ತಿ ಪ್ರದಾನ ಮಾಡಿ ಅವರು ಮಾತನಾಡಿದರು. ಬಸವಣ್ಣ ಅರ್ಥ ಆಗ್ಬೇಕು ಅಂದರೆ ಮೊದಲು ಕರ್ಮಸಿದ್ಧಾಂತ ಮತ್ತು ಹಣೆಬರಹ ಎನ್ನುವ ಮೌಢ್ಯವನ್ನು ಬಿಡುವ ಶಪಥ ಮಾಡಬೇಕು ಎಂದು ಹೇಳಿದರು.

**ಧ್ವನಿ: ಮುಖ್ಯಮಂತ್ರಿ**

ಕೂಡಲಸಂಗಮದ ಬಸವ ಮಂಟಪದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ನಡೆದ ಅನುಭವ ಮಂಟಪ ಬಸವಾದಿ ಶರಣರ ವೈಭವ ಮತ್ತು ಬಸವ ರಾಷ್ಟ್ರೀಯ ಪುರಸ್ಕಾರ ಪ್ರಶಸ್ತಿ ಪ್ರದಾನ ಮಾಡಲಾಯಿತು. ಕಾರ್ಯಕ್ರಮದಲ್ಲಿ ೨೦೨೪-೨೫ನೇ ಸಾಲಿನ ಬಸವ ರಾಷ್ಟ್ರೀಯ ಪ್ರಶಸ್ತಿಯನ್ನು ಧಾರವಾಡದ ಡಾ.ಎಸ್.ಆರ್.ಗುಂಜಾಳ ಅವರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಧಾನ ಮಾಡಿದರು. ಸಾಂಸ್ಕೃತಿಕ ನಾಯಕ ಬಸವೇಶ್ವರರ ತತ್ತ್ವವಿಚಾರಗಳನ್ನು ಜನ ಸಾಮಾನ್ಯರಿಗೆ ತಲುಪಿಸುವಲ್ಲಿ ರಾಜ್ಯ ಸರ್ಕಾರ ಬದ್ಧವಾಗಿದೆ ಎಂದು ಕಾನೂನು, ಸಂಸದೀಯ ವ್ಯವಹಾರಗಳ ಸಚಿವ ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಗದಗನಲ್ಲಿ ಹೇಳಿದರು.

<><><><>

ರಾಜ್ಯದ ವಿವಿಧೆಡೆ ಇಂದು ಬಸವ ಜಯಂತಿಯನ್ನು ಆಚರಿಸಲಾಯಿತು. ಬಸವಣ್ಣನವರು ಕೇವಲ ಎಂಟು ವರ್ಷದವರಿದ್ದಾಗ, ಹಿಂದುಳಿದ ಹಾಗೂ ಶೋಷಿತ ವರ್ಗದವರ ಬಗ್ಗೆ ಚಿಂತನೆ ಮಾಡಿದ್ದರು ಎಂದು ಜಗದ್ಗುರು ಡಾ.ಗುರುಸಿದ್ಧ ರಾಜಯೋಗೀಂದ್ರ ಮಹಾಸ್ವಾಮಿ ಹುಬ್ಬಳ್ಳಿಯಲ್ಲಿ ತಿಳಿಸಿದ್ದಾರೆ.

**ಧ್ವನಿ: ಗುರುಸಿದ್ಧ ರಾಜಯೋಗೀಂದ್ರ ಮಹಾಸ್ವಾಮಿ**

ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ, ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ವಿಶ್ವ ಗುರು ಜಗಜ್ಯೋತಿ ಬಸವಣ್ಣನವರ ಜಯಂತಿ ಆಚರಿಸಲಾಯಿತು. ಕಾರವಾರದಲ್ಲಿ ಬಸವಣ್ಣನವರ ಭಾವಚಿತ್ರಕ್ಕೆ ಉತ್ತರಕನ್ನಡ ಜಿಲ್ಲಾಧಿಕಾರಿ ಕೆ. ಲಕ್ಷ್ಮಿಪ್ರಿಯ ಪುಷ್ಪ ನಮನ

ಸಲ್ಲಿಸಿದರು. ಬಳಿಕ ಮಾತನಾಡಿದ ಅವರು, ವಿಶ್ವ ಕಂಡ ಶ್ರೇಷ್ಠ ಮೇಧಾವಿ ಬಸವಣ್ಣ ಎಂದು ಹೇಳಿದರು.  ಬಳ್ಳಾರಿ ನಗರದ ಸಂಗನಕಲ್ಲು ರಸ್ತೆಯ ಕೆಇಬಿ ಬಳಿಯ ವೃತ್ತವನ್ನು ಶಾಸಕ ಬಿ.ನಾಗೇಂದ್ರ ಹಾಗೂ ಶಾಸಕ ಭರತ್ ರೆಡ್ಡಿ ಬಸವೇಶ್ವರ ಸರ್ಕಲ್ ಎಂದು ನಾಮಕರಣ ಮಾಡಿದರು. ಜಗಜ್ಯೋತಿ ಬಸವೇಶ್ವರರ ಮೂಲ ಆಶಯದಂತೆ ಕೊಟ್ಟೂರು ಮಠ ಎಲ್ಲ ಜಾತಿ ಧರ್ಮಗಳ ಸಾಮೂಹಿಕ ವಿವಾಹ ನೆರವೇರಿಸಿದೆ ಎಂದು  ವಿಜಯನಗರ ಜಿಲ್ಲಾಧಿಕಾರಿ ಎಂ ಎಸ್ ದಿವಾಕರ್  ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಸಾಮೂಹಿಕ ವಿವಾಹ ಕಾರ್ಯಕ್ರಮದಲ್ಲಿ ೧೮ ಜೋಡಿಗಳ ಸಾಮೂಹಿಕ ವಿವಾಹ ಮತ್ತು ೨೬ ವಟುಗಳಿಗೆ  ಅಯ್ಯಾಚಾರ ಲಿಂಗ ದೀಕ್ಷೆ ನೀಡಲಾಯಿತು.

<><><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲದಲ್ಲಿ ಬಸವಣ್ಣದೇವರ ಮಠದ ವತಿಯಿಂದ ಬಸವೇಶ್ವರ ಜಯಂತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.  ೧೨ನೇ ಶತಮಾನದಲ್ಲಿ ಮಾನವಕುಲಕ್ಕೆ ಮಾರ್ಗದರ್ಶಕರಾಗಿದ್ದ ಬಸವಣ್ಣನವರ ತತ್ವಗಳು ಇಂದಿಗೂ  ಪ್ರಸ್ತುತವಾಗಿವೆ ಎಂದು ಮೈಸೂರಿನಲ್ಲಿ ಶಾಸಕ ತನ್ವೀರ್ ಸೇಠ್ ಅಭಿಪ್ರಾಯಪಟ್ಟಿದ್ದಾರೆ. ಸಾಮಾಜಿಕ ಆಂದೋಲನಕಾರರಾಗಿ ವಚನಕಾರರಾಗಿ ಅಂದಿನ ಕಾಲಘಟ್ಟದಲ್ಲಿ ಗುರುತಿಸಿಕೊಂಡವರು ಬಸವಣ್ಣನವರು ಎಂದು ರಾಮನಗರ ಶಾಸಕ ಹೆಚ್.ಎ. ಇಕ್ಬಾಲ್ ಹುಸೇನ್ ತಿಳಿಸಿದ್ದಾರೆ.

<><><>

ಹುಬ್ಬಳ್ಳಿಯಲ್ಲಿ ನಡೆದ ಬಾಲಕಿ ಅಪಹರಣ, ಅತ್ಯಾಚಾರ ಹಾಗೂ ಪೊಲೀಸ್ ಎನ್‌ಕೌಂಟರ್‌ನಲ್ಲಿ ಬಂಧಿತ ಆರೋಪಿಯ ಸಾವಿನ ಕುರಿತಂತೆ ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗ ನೋಟಿಸ್ ನೀಡಿದೆ. ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಮತ್ತು  ಪೊಲೀಸ್ ಮಹಾನಿರ್ದೇಶಕರಿಗೆ ನೋಟಿಸ್ ಜಾರಿ ಮಾಡಲಾಗಿದೆ. ನಾಲ್ಕು ವಾರಗಳಲ್ಲಿ ವರದಿ ಸಲ್ಲಿಸುವಂತೆ ಆಯೋಗ ಸೂಚಿಸಿದೆ. ಘಟನೆಯ ಬಗ್ಗೆ ಮಾಧ್ಯಮಗಳಲ್ಲಿ ಬಂದ ವರದಿಯನ್ನು ಆಧರಿಸಿ ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗ ಸ್ವಯಂ ಪ್ರೇರಿತವಾಗಿ ವಿಚಾರಣೆ ನಡೆಸುತ್ತಿದೆ.

<><><>

ವಿಶ್ವ ಶ್ರವಣ, ದೃಶ್ಯ ಮತ್ತು ಮನರಂಜನಾ ಶೃಂಗಸಭೆ-ವೇವ್ಸ್ ನಾಳೆಯಿಂದ ನಾಲ್ಕು ದಿನಗಳ ಕಾಲ ಮುಂಬೈನ ಜಿಯೋ ವರ್ಲ್ಡ್ ಕನ್ವೆನ್ಷನ್ ಸೆಂಟರ್‌ನಲ್ಲಿ ಪ್ರಾರಂಭವಾಗಲಿದೆ. ಪ್ರಧಾನಿ ನರೇಂದ್ರ ಮೋದಿ ನಾಳೆ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ನಾಲ್ಕು ದಿನಗಳ ಕಾಲ ನಡೆಯಲಿರುವ ಈ ಶೃಂಗಸಭೆಯು, ಶ್ರವಣ-ದೃಶ್ಯ ಮತ್ತು ಮನರಂಜನಾ ಉದ್ಯಮದ ಭವಿಷ್ಯದ ಕುರಿತು ಚರ್ಚೆಗಳಿಗೆ ಜಾಗತಿಕ ವೇದಿಕೆಯನ್ನು ಒದಗಿಸಲಿದೆ. ಜಾಗತಿಕ ಮಾಧ್ಯಮ ಸಂವಾದಗಳು,

ಖರೀದಿದಾರರು ಮತ್ತು ಮಾರಾಟಗಾರರ ನಡುವಿನ ಭೇಟಿಗಳು, ಉದಯೋನ್ಮುಖ ಪ್ರತಿಭೆಗಳ ಮತ್ತು ಹೊಸ ತಲೆಮಾರಿನ ಕಥನ ಶೈಲಿಗಳ ಪ್ರದರ್ಶನಗಳಿಗೆ ವೇದಿಕೆಯಾಗಿ ಶೃಂಗಸಭೆ ಕಾರ್ಯನಿರ್ವಹಿಸಲಿದೆ. ವೇವ್ಸ್ ಶೃಂಗಸಭೆಯು, ಭಾರತದ ಮನರಂಜನೆ ಮತ್ತು ಸೃಜನಶೀಲತೆಯ ಅಗಾಧ ಸಾಮರ್ಥ್ಯವನ್ನು ಜಗತ್ತಿಗೆ ಪ್ರದರ್ಶಿಸಲು ಗಮನಾರ್ಹ ಅವಕಾಶವನ್ನು ಒದಗಿಸಲಿದೆ. ನಾಳೆಯಿಂದ ಪ್ರಾರಂಭವಾಗುವ ನಾಲ್ಕು ದಿನಗಳ ಈ ಕಾರ್ಯಕ್ರಮವು, ವಿಶ್ವದ ಉನ್ನತ ಮಾಧ್ಯಮ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು, ಪ್ರಮುಖ ಮನರಂಜನಾ ರಾಯಭಾರಿ ಮತ್ತು ಜಗತ್ತಿನಾದ್ಯಂತದ ಸೃಜನಶೀಲರನ್ನು ಒಟ್ಟುಗೂಡಿಸುತ್ತದೆ.

<><><><>

ಮಂಗಳೂರಿನಲ್ಲಿ ನಡೆದ ಹಲ್ಲೆ ಪ್ರಕರಣದ ಆರೋಪಿಗಳ ವಿರುದ್ಧ ಕ್ರಮ ಕೈಗೊಳ್ಳುವ ಹಿನ್ನೆಲೆಯಲ್ಲಿ ಶಾಂತಿ ಕದಡಲು ಪ್ರಯತ್ನಿಸಿದರೆ, ಕ್ರಮ ಕೈಗೊಳ್ಳುವುದಾಗಿ ದಕ್ಷಿಣ ಕನ್ನಡ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಎಚ್ಚರಿಕೆ ನೀಡಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಕರಣಕ್ಕೆ ಸಂಬಂಧಿಸಿದಂತೆ ೨೦ ಮಂದಿಯನ್ನು ಬಂಧಿಸಲಾಗಿದೆ. ಮೃತನನ್ನು ಕೇರಳದ ಮೊಹಮ್ಮದ್ ಅಶ್ರಫ್ ಎಂದು ಗುರುತಿಸಲಾಗಿದೆ. ಈತ ಮಾನಸಿಕ ಸಮಸ್ಯೆಗಳನ್ನು ಹೊಂದಿದ್ದ ಎಂದು ಸಚಿವರು ತಿಳಿಸಿದ್ದಾರೆ.

<><><><>

ಪಹಲ್ಗಾಮ್ ನಲ್ಲಿ ಉಗ್ರರ ದಾಳಿ ವಿಚಾರಕ್ಕೆ ಸಂಬಂಧಿಸಿದಂತೆ ಪಾಕಿಸ್ತಾನದ ವಿರುದ್ಧ ಪ್ರಧಾನಿ ನರೇಂದ್ರ ಮೋದಿ ಯಾವುದೇ ನಿರ್ಧಾರ ತೆಗೆದುಕೊಂಡರೂ ಸ್ವಾಗತಾರ್ಹ ಎಂದು ಕಾರ್ಮಿಕ ಸಚಿವ ಸಂತೋಷ್ ಲಾಡ್ ತಿಳಿಸಿದ್ದಾರೆ.

ಮೈಸೂರಿನಲ್ಲಿ ಮಾತನಾಡಿದ ಅವರು, ಮಾಜಿ ಪ್ರಧಾನಿ ಇಂದಿರಾ ಗಾಂಧಿಯವರು ಈ ಹಿಂದೆ ಪಾಕಿಸ್ತಾನದವರನ್ನು ಮಂಡಿಯೂರಿ ಕೂರುವಂತೆ ಮಾಡಿದ್ದರು. ಅದೇ ರೀತಿ ಪ್ರಧಾನಿ ಮೋದಿ ಕ್ರಮ ವಹಿಸಲಿ ಎಂದು ಹೇಳಿದ್ದಾರೆ. ಮಂಗಳೂರಿನಲ್ಲಿ ಪಾಕಿಸ್ತಾನದ ಪರ ಘೋಷಣೆ ವಿಚಾರ ಕುರಿತು ಪ್ರತಿಕ್ರಿಯಿಸಿದ ಅವರು, ಘೋಷಣೆ ಕೂಗಿದವರಿಗೆ ಶಿಕ್ಷೆ ಆಗಲಿ ಎಂದು ತಿಳಿಸಿದ್ದಾರೆ.

<><><><>

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ನೂತನ ಆಡಳಿತಗಾರರಾಗಿ ತುಷಾರ್ ಗಿರಿನಾಥ್ ಹಾಗೂ ಮುಖ್ಯ ಆಯುಕ್ತರಾಗಿ ಮಹೇಶ್ವರ್ ರಾವ್ ಇಂದು ಬಿಬಿಎಂಪಿ ಕೇಂದ್ರ ಕಛೇರಿಯಲ್ಲಿ ಅಧಿಕಾರ ಸ್ವೀಕರಿಸಿದರು. ಈ ವೇಳೆ ವಿಶೇಷ ಆಯುಕ್ತರಾದ ಅವಿನಾಶ್ ಮೆನನ್ ರಾಜೇಂದ್ರನ್,

ವಲಯ ಆಯುಕ್ತರಾದ ಕರೀಗೌಡ, ಇಂಜಿನಿಯರಿಂಗ್ ವಿಭಾಗದ ಮುಖ್ಯಸ್ಥರಾದ ಪ್ರಹ್ಲಾದ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

<><><><>

ಕೇಂದ್ರ ತನಿಖಾ ದಳ - ಸಿಬಿಐ ಅಂತಾರಾಷ್ಟ್ರೀಯ ಸಂಪರ್ಕ ಹೊಂದಿರುವ ಆನ್‌ಲೈನ್ ಮಕ್ಕಳ ಲೈಂಗಿಕ ಶೋಷಣೆಯ ಸೈಬರ್ ಅಪರಾಧದ ಜಾಲಗಳನ್ನು ಭೇದಿಸಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>